**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ: 70/2024**

**ಪಿರ್ಯಾದಿದಾರರು:** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**ಆರೋಪಿತರು:**
1. **ರಂಗಲಕ್ಷ್ಮಿ** ಕೋಂ ಪರಮೇಶ್ವರ
2. ಜಾನವಿ ಬಿನ್ ಪರಮೇಶ್ವರ
3. ಪರಮೇಶ್ವರ ಬಿನ್ ಚಿಕ್ಕಚಾರ್

**ಆಪಾದನೆ**

**ಶ್ರೀಮತಿ ಕುಸುಮ ವಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಹೊರಿಸುವ ಆಪಾದನೆ ಏನೆಂದರೆ,

ದಿನಾಂಕ: 20.06.2023 ರಂದು ಸುಮಾರು 4.00 ಗಂಟೆ ಸಮಯದಲ್ಲಿ, ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ, ಮಹಾಲಕ್ಷ್ಮಿ ಲೇಔಟ್ ನಲ್ಲಿ 1 ಮತ್ತು 2 ನೇ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಸಾಕ್ಷಿ.1 ರವರು ನೆಟ್ಟಿದ್ದ ಗಿಡವನ್ನು ಕಿತ್ತುಹಾಕಿ ಜಗಳ ತೆಗೆದು, ಆರೋಪಿತರಾದ ನೀವು ಸಾಕ್ಷಿ.1 ರವರನ್ನು ಕುರಿತು, ಅವರು ಕುಪಿತರಾಗಿ ಶಾಂತಿಭಂಗವನ್ನುಂಟುಮಾಡಲಿ ಎಂಬ ಉದ್ದೇಶದಿಂದ, ಸಾಕ್ಷಿ.1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂ: 504 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**2)** ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ 1 ಮತ್ತು 2 ನೇ ಆರೋಪಿಗಳಾದ ನೀವು ಸಮಾನ ಉದ್ದೇಶವನ್ನು ಹೊಂದಿ, ನಿಮ್ಮ ಸ್ವ ಇಚ್ಛೆಯಿಂದ ಸಾಕ್ಷಿ.1 ರವರ ತಲೆ, ಕುತ್ತಿಗೆ ಮತ್ತು ಮೈಕೈಗೆ ಕೈಗಳಿಂದ ಹೊಡೆದು, 3 ನೇ ಆರೋಪಿಯಾದ ನೀವು ಸಾಕ್ಷಿ.1 ರವರ ಎದೆಗೆ ಕೈಯಿಂದ ಹೊಡೆದು ಕಾಲಿದನಿಂದ

ಒದ್ದು ನೊವುಂಟು ಮಾಡಿ  ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 323 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**3)** ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿಆರೋಪಿತರಾದ  ನೀವು ಸಮಾನ ಉದ್ದೇಶವನ್ನು ಹೊಂದಿ, ಸಾಕ್ಷಿ.1 ರವರಿಗೆ ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆ ಉಂಟು ಮಾಡಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 506 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**ಪ್ರಶ್ನೆಃ** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ಆಪಾದನೆ ನಿಮಗೆ ತಿಳಿಯಿತೆ?

1 ನೇ ಆರೋಪಿಯ ಉತ್ತರಃ

2 ನೇ ಆರೋಪಿಯ ಉತ್ತರಃ

3 ನೇ ಆರೋಪಿಯ ಉತ್ತರಃ

**ಪ್ರಶ್ನೆಃ** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ?

1 ನೇ ಆರೋಪಿಯ ಉತ್ತರಃ

2 ನೇ ಆರೋಪಿಯ ಉತ್ತರಃ

3 ನೇ ಆರೋಪಿಯ ಉತ್ತರಃ

(ಈ ಆಪಾದನೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕಃ **15.11.2025**

(ಶ್ರೀಮತಿ ಕುಸುಮ ವಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.